ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/06/ಸುತ್ತೋಲೆ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-01
ದಿನಾಂಕ: 13.11.2020

## ಸುತ್ತೋಲೆ

**ವಿಷಯ:** 2020-21 ನೇ ಸಾಲಿನ ಶೈಕ್ಷಣಿಕ ತರಗತಿಗಳನ್ನು ಪ್ರಾರಂಭಿಸುವ ಸಂಬಂಧ Sanitizer, Sanitizer stand, Thermal scanner, Pulse Oximeter ವ್ಯವಸ್ಥೆ ಕಲ್ಪಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಇಡಿ 334 ಯುಎನ್ಇ 2020, ದಿನಾಂಕ: 09.11.2020.

*****

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1) ರ ಸರ್ಕಾರದ ಆದೇಶದಲ್ಲಿ ದಿನಾಂಕ:17.11.2020 ರಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು/ಖಾಸಗಿ ವಿಶ್ವವಿದ್ಯಾಲಯಗಳು/ ಸರ್ಕಾರಿ/ ತಾಂತ್ರಿಕ/ ಡಿಪ್ಲೊಮೊ/ ಅನುದಾನ/ ಅನುದಾನ ರಹಿತ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, ಕೇಂದ್ರ ಸರ್ಕಾರದ University Grant Commission ನೀಡಿರುವ ಮಾರ್ಗಸೂಚಿಯಂತೆ ಶೈಕ್ಷಣಿಕ ಸಂಸ್ಥೆಗಳೂ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾರ್ಗಸೂಚಿಯನ್ನು ನೀಡಿ, ಸದರಿ ಮಾರ್ಗಸೂಚಿಯನ್ನು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ/ ತಾಂತ್ರಿಕ/ ಡಿಪ್ಲೊಮೊ/ ಅನುದಾನಿತ/ ಅನುದಾನ ರಹಿತ ಕಾಲೇಜುಗಳ ಹಾಗೂ ವಿಶ್ವವಿದ್ಯಾಲಯಗಳು/ ಖಾಸಗಿ ವಿಶ್ವವಿದ್ಯಾಲಯಗಳು ಪಾಲಿಸಲು ಆದೇಶಿಸಲಾಗಿದೆ.

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸುವ ಸಂಬಂಧ ಕೋವಿಡ್-19 ಹರಡದಂತೆ ಮುಂಜಾಗೃತೆ ವಹಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.

1. ಕಾಲೇಜಿನ ಸಂಪೂರ್ಣ ಕಟ್ಟಡ, ಆವರಣಗಳನ್ನು Sanitize ಮಾಡಿಸುವುದು.
2. ಕಾಲೇಜಿನ ವಿದ್ಯಾರ್ಥಿ, ಬೋಧಕರ ಮತ್ತು ಬೋಧಕೇತರ ಉಪಯೋಗಕ್ಕಾಗಿ Sanitizer stand with Sanitizer ವ್ಯವಸ್ಥೆ ಕಲ್ಪಿಸುವುದು.
3. Thermal scanner, & Pulse Oximeter ಖರೀದಿಸಿ ಉಪಯೋಗಿಸುವುದು.

ಕೋವಿಡ್ ಮಾರ್ಗಸೂಚಿಯಲ್ಲಿ ಪ್ರಸ್ತಾಪಿಸಿರುವ **ಪೋಷಕರ ಒಪ್ಪಿಗೆ** ಪತ್ರದ ನಮೂನೆಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದ್ದು, ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ**

**ಇವರಿಗೆ:**

1. **ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.**
2. **ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ – ಅಗತ್ಯ ಕ್ರಮಕ್ಕಾಗಿ.**

**ಪ್ರತಿಯನ್ನು :**

1. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ,ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
2. ಕಛೇರಿ ಪ್ರತಿ